# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 321 |
| ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.09.2022 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಹೊಸ ತಾಲ್ಲೂಕುಗಳನ್ನು ರಚಿಸಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ 14 ಹೊಸ ತಾಲ್ಲೂಕುಗಳನ್ನು ರಚಿಸಲು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಈ ಕೆಳಕಂಡ 12 ತಾಲ್ಲೂಕುಗಳಿಗೆ ಅಂತಿಮ ಅಧಿಸೂಚನೆ ಹೊರಡಿಸಿದ್ದು, ಅಧಿಕೃತವಾಗಿ ಅಸ್ತಿತ್ವಕ್ಕೆ ಬಂದಿವೆ.<br><br>1.ಹಾರೋಹಳ್ಳಿ 2. ಚೇಳೂರು 3. ಕಳಸಾ<br>4. ಪೊನ್ನಂಪೇಟೆ 5. ಕುಶಾಲನಗರ<br>6. ಆಲಮೇಲ 7. ಮುಲ್ಕಿ 8. ಉಲ್ಲಾಳ<br>9 .ಸಾಲಿಗ್ರಾಮ 10. ಯರಗಟ್ಟಿ<br>11. ಮಂಚೇನಹಳ್ಳಿ 12.ಅರಕೇರಾ<br><br>ಇನ್ನುಳಿದಂತೆ ತೇರದಾಳ ನೂತನ ತಾಲ್ಲೂಕಿನ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು, ನಿಗಧಿತ ಅವಧಿಯಲ್ಲಿ ಸ್ವೀಕೃತವಾಗುವ ಸಲಹೆ/ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು. ಶಾಂತಿಗ್ರಾಮ ನೂತನ ತಾಲ್ಲೂಕಿಗೆ ಗ್ರಾಮಗಳನ್ನು ಸೇರ್ಪಡೆ ಮಾಡಿ ಅಧಿಸೂಚನೆ ಹೊರಡಿಸಬೇಕಾಗಿದ್ದು, ಜಿಲ್ಲಾಧಿಕಾರಿ, ಹಾಸನ ಜಿಲ್ಲೆ ಇವರಿಂದ ವರದಿ ನಿರೀಕ್ಷಿಸಲಾಗಿದೆ. |
| ಆ) | ಬೆಳಗಾವಿ ಜಿಲ್ಲೆಯು ರಾಜ್ಯದ ಎರಡನೇ ಅತಿ ದೊಡ್ಡ ಜಿಲ್ಲೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬೆಳಗಾವಿ ಜಿಲ್ಲೆಯನ್ನು ಪುನರ್ವಿಂಗಡಿಸಿ ಅಧಿಕಾರ ವಿಕೇಂದ್ರೀಕರಣ ಮಾಡುವ ಯೋಜನೆ ಅಥವಾ ಹೊಸ ಜಿಲ್ಲೆಯನ್ನು ರಚಿಸಲು ಸರ್ಕಾರದಿಂದ ಯಾವುದಾದರೂ ಪ್ರಸ್ತಾವನೆ ಇದೆಯೇ; | ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಹೊಸ ಜಿಲ್ಲೆಗಳನ್ನು ರಚಿಸುವಂತೆ ಕೋರಿಕೆಗಳು ಸ್ವೀಕೃತಗೊಂಡಿರುತ್ತವೆ. ಆದರೆ ಬೆಳಗಾವಿ ಜಿಲ್ಲೆಯನ್ನು ವಿಭಜಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |
| ಇ) | ಪ್ರಸ್ತಾವನೆ ಇದ್ದಲ್ಲಿ, ಬೆಳಗಾವಿಯನ್ನು ಎಷ್ಟು ಹೊಸ ಜಿಲ್ಲೆಗಳನ್ನಾಗಿ ರಚಿಸಲಾಗುವುದು ಮತ್ತು ಯಾವಾಗ? | ಉದ್ಭವಿಸುವುದಿಲ್ಲ. |

**ಸಂಖ್ಯೆ: ಕಂಇ 56 ಎಲ್‌ಆರ್‌ಡಿ 2022**

(ಆರ್. ಅಶೋಕ)
ಕಂದಾಯ ಸಚಿವರು